ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ, ಮೈಸೂರು

ಸಂಖ್ಯೆ:ಜಂ.ನಿ:ಸಕಇ:ಸಿಬ್ಬಂಧಿ:ಸಿಆರ್70:2015-16 ದಿನಾಂಕ: 27.07.2017

## ಅಧಿಸೂಚನೆ

ಸಮಾಜ ಕಲ್ಯಾಣ ಇಲಾಖೆ, ಮೈಸೂರು ಜಿಲ್ಲೆ ವ್ಯಾಪ್ತಿಯಲ್ಲಿ ಖಾಲಿ ಇರುವ ಗ್ರೂಪ್-ಡಿ ವೃಂದದ ಅಡುಗೆ ಸಹಾಯಕರು / ರಾತ್ರಿ ಕಾವಲುಗಾರರ ಹುದ್ದೆಗಳನ್ನು ನೇರ ನೇಮಕಾತಿ ಮುಖೇನ ಭರ್ತಿ ಮಾಡಲು ಆನ್‌ಲೈನ್ ಮುಖೇನ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರ ದಿನಾಂಕ: 06.12.2016 ರಲ್ಲಿನ ಸೂಚನೆಗಳಂತೆ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು. ನಂತರದಲ್ಲಿ ದಿನಾಂಕ: 03.07.2017 ರಲ್ಲಿ ಪ್ರಕ್ರಿಯೆಯನ್ನು ಪ್ರಾರಂಭಿಸಿ ನಿಗಧಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಸೂಚನೆ ನೀಡಿದ ಮೇರೆಗೆ ಪ್ರಕ್ರಿಯೆಯನ್ನು ಪ್ರಾರಂಭಿಸಿ ಆನ್‌ಲೈನ್‌ನಲ್ಲಿ ಸಲ್ಲಿಸಲಾಗಿದ್ದ ಅರ್ಜಿಗಳಲ್ಲಿ 1:5 ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ದಾಖಲಾತಿ ಪರಿಶೀಲನೆಗಾಗಿ ಆಹ್ವಾನಿಸಲಾಗಿತ್ತು. ಅದರಂತೆ ದಾಖಲಾತಿ ಪರಿಶೀಲನೆಗೆ ಹಾಜರಾಗಿ ಅರ್ಹರಾದ ಅಭ್ಯರ್ಥಿಗಳ 1:3 ಅನುಪಾತದ ಪಟ್ಟಿಯನ್ನು ಪಡೆದು ಪ್ರಾಯೋಗಿಕ ಪರೀಕ್ಷೆ / ದೇಹ ದಾರ್ಢ್ಯತೆ ಪರೀಕ್ಷೆಗೆ ಒಳಪಡಿಸಲಾಗಿದ್ದು, ಸದರಿ ಪರೀಕ್ಷೆಗಳಲ್ಲಿ ಹಾಜರಾಗಿ ಅರ್ಹರಾದ ಅಭ್ಯರ್ಥಿಗಳ 1 : 1 ರ ಅನುಪಾತದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ: 11.07.2017 ರಂದು ಪ್ರಕಟಿಸಿ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ: 24.07.2017 ರೊಳಗೆ ಸಲ್ಲಿಸುವಂತೆ ಅವಕಾಶವನ್ನು ಕಲ್ಪಿಸಲಾಗಿತ್ತು. ಅದರಂತೆ ಸ್ವೀಕೃತಗೊಂಡ ಆಕ್ಷೇಪಣೆಗಳನ್ನು ಪರಿಶೀಲಿಸಿ ಸೂಕ್ತ ಹಿಂಬರಹವನ್ನು ನೀಡಲಾಗಿದೆ. ಹಾಗೂ ಪ್ರಸ್ತುತ ಅಂತಿಮವಾಗಿ ಅರ್ಹರಾದ 19 ಅಡುಗೆ ಸಹಾಯಕರು ಹಾಗೂ 36 ರಾತ್ರಿ ಕಾವಲುಗಾರರ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ.

ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು
ಸಮಾಜ ಕಲ್ಯಾಣ ಇಲಾಖೆಯ ಗ್ರೂಪ್ "ಡಿ"
ಹುದ್ದೆಗಳ ನೇರ ನೇಮಕಾತಿ ಆಯ್ಕೆ ಸಮಿತಿ
ಮೈಸೂರು ಜಿಲ್ಲೆ, ಮೈಸೂರು.